ಕರ್ನಾಟಕ ಸರ್ಕಾರ
ಸಾರ್ವಜನಿಕ ಶಿಕ್ಷಣ ಇಲಾಖೆ
ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ,
ಬೆಂಗಳೂರು–560001

ಸಂಖ್ಯೆ : ಸಹನಿಶಾಶಿ.ಆಶಾ/ಕ.ವ್ಯ.ಕು:ಜಾ:ಸು/32544./ಇ.ವಿ:2020 ದಿನಾಂಕ : 15.03.2020

(ಪರಿಷ್ಕೃತ)

**–: ಸುತ್ತೋಲೆ :–**

ವಿಷಯ : ಪರೀಕ್ಷೆಗೆ ಹಾಜರಾಗುತ್ತಿರುವ ವಿದ್ಯಾರ್ಥಿಗಳು Novel Coronavirus (COVID-19) ವೈರಸ್ ನ ಸೋಂಕು ತಡೆಗಟ್ಟುವಿಕೆಗೆ ಕ್ರಮ ಕೈಗೊಳ್ಳುವ ಬಗ್ಗೆ

ಉಲ್ಲೇಖ : ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ : 14.03.2020.

– – –

Novel Coronavirus (COVID-19) ಈ ವೈರಸ್ ಸೋಂಕು ತಡೆಗಟ್ಟುವಿಕೆಗೆ ಮುಂಜಾಗೃತ ಕ್ರಮವಾಗಿ 7 ರಿಂದ 9ನೇ ತರಗತಿಯವರೆಗಿನ ವಿದ್ಯಾರ್ಥಿಗಳ ಪರೀಕ್ಷೆಯನ್ನು ದಿನಾಂಕ : 31.03.2020 ರವರೆಗೆ ಮುಂದೂಡಲಾಗಿದೆ ಹಾಗೂ ಅಲ್ಲಿಯವರೆಗೆ ಈ ವಿದ್ಯಾರ್ಥಿಗಳಿಗೆ ಪರೀಕ್ಷಾ ಪೂರ್ವಸಿದ್ಧತಾ ರಜೆಯನ್ನು (Study Holiday) ಘೋಷಿಸಿದೆ ಎಂದು ಉಲ್ಲೇಖಿತ ಸುತ್ತೋಲೆಯಲ್ಲಿ ತಿಳಿಸಲಾಗಿತ್ತು. ಆದರೆ, ಸದರಿ ಸುತ್ತೋಲೆಯು ರಾಜ್ಯ ಹಾಗೂ ಕೇಂದ್ರ ಪಠ್ಯಕ್ರಮ ಬೋಧಿಸುತ್ತಿರುವ ಎಲ್ಲಾ ಶಾಲೆಗಳಿಗೆ ಅನ್ವಯವಾಗುತ್ತದೆಯೇ ಎಂಬ ಹಲವಾರು ದೂರವಾಣಿ ಕರೆಗಳು ಸ್ವೀಕೃತವಾದ ಹಿನ್ನೆಲೆಯಲ್ಲಿ ಈ ಕೆಳಕಂಡಂತೆ ಸ್ಪಷ್ಟೀಕರಿಸಿದೆ :

ದಿನಾಂಕ : 14.03.2020 ರಂದು ಹೊರಡಿಸಿರುವ ಸುತ್ತೋಲೆಯಲ್ಲಿನ ಅಂಶಗಳು "ರಾಜ್ಯ ಪಠ್ಯಕ್ರಮ / ಸಿ.ಬಿ.ಎಸ್.ಇ / ಐ.ಸಿ.ಎಸ್.ಇ / ಐ.ಜಿ.ಸಿ.ಎಸ್.ಇ. / ಐ.ಬಿ., ಮುಂತಾದ ಪಠ್ಯಕ್ರಮದ ಎಲ್ಲಾ ಶಾಲೆಗಳಿಗೂ ಸಹ ಅನ್ವಯವಾಗುತ್ತದೆ."

(ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)

ನಿರ್ದೇಶಕರು (ಪ್ರೌಢ ಶಿಕ್ಷಣ)
ಸಾರ್ವಜನಿಕ ಶಿಕ್ಷಣ ಇಲಾಖೆ

ಗೆ :

1) ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ.

Scanned with CamScanner

2) ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ (ಜಿಲ್ಲಾ ಉಪನಿರ್ದೇಶಕರ ಮುಖಾಂತರ)
3) ರಾಜ್ಯದ ಎಲ್ಲಾ ಸರ್ಕಾರಿ / ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳ ಮುಖ್ಯೋಪಾಧ್ಯಾಯರುಗಳಿಗೆ ಕಳುಹಿಸುತ್ತಾ ಅತೀ ತುರ್ತು ಕ್ರಮ ಮತ್ತು ಅನುಷ್ಠಾನಕ್ಕಾಗಿ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ)

ಪ್ರತಿಯನ್ನು ಗೌರವಗಳೊಂದಿಗೆ ಮಾಹಿತಿಗಾಗಿ

1) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ ಮಾನ್ಯ ಸಚಿವರ ಗಮನಕ್ಕೆ ತರಲು ಕೋರಿದೆ.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ.

Scanned with CamScanner